ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಗುರುವಾರ, ದಿನಾಂಕ ೨೨ನೇ ಮಾರ್ಚ್ ೧೯೯೦, ಚೈತ್ರ ೧, ೧೯೧೨ ಶಕ

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ ೧೧-೦೦ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು (ಶ್ರೀ ಎಸ್.ಎಂ. ಕೃಷ್ಣ) ಅವರು ಪೀಠವನ್ನು ಅಲಂಕರಿಸಿದರು.

ಸಂತಾಪ ಸೂಚನೆ

ಅಧ್ಯಕ್ಷರು.—ವಿಧಾನ ಸಭೆಯ ಮಾಜಿ ಸದಸ್ಯರಾದ ಶ್ರೀಯುತ ಎಂ. ಮಲ್ಲಪ್ಪನವರು ೨೧ನೇ ಮಾರ್ಚ್ ೧೯೯೦ರಂದು ನಿಧನರಾದರೆಂದು ಸದನಕ್ಕೆ ತಿಳಿಸಲು ವಿಷಾದಿಸುತ್ತೇನೆ. ಶ್ರೀಯುತರು ಹಿಂದೆ ವಿಧಾನಸಭೆಯ ಸದಸ್ಯರಾಗಿ ಸುಪ್ರಸಿದ್ಧ ವಕೀಲರಾಗಿಯೂ ಮತ್ತು ಹಲವಾರು ಸಂಘ ಸಂಸ್ಥೆಗಳಲ್ಲಿ ಶ್ಲಾಘನೀಯವಾದ ಸೇವೆಯನ್ನು ಸಲ್ಲಿಸಿದ್ದರು. ಮೃತರ ಗೌರವಾರ್ಥ ಮಾನ್ಯ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳೆಲ್ಲರೂ ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಿದರು.)

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು,

ಭರಮಸಾಗರದ ರಸ್ತೆ ರಿಪೇರಿ

೧೬೦. ಶ್ರೀ ಕೆ. ಶಿವಮೂರ್ತಿ (ಭರಮಸಾಗರ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಭರಮಸಾಗರ ವೀಸಲು ಕ್ಷೇತ್ರದ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಗೆ ಬರುವ ರಸ್ತೆಗಳು ಎಷ್ಟು ಹಾಗೂ ಯಾವುವು ?

ಆ) ಈ ರಸ್ತೆಗಳಿಗೆ ೧೯೮೭-೮೮, ೧೯೮೮-೮೯ ಮತ್ತು ೧೯೮೯-೯೦ನೇ ಆಯವ್ಯಯಗಳಲ್ಲಿ ಒದಗಿಸಿದ ಅನುದಾನದ ವೊತ್ತವೆಷ್ಟು ? ಮತ್ತು ಬಿಡುಗಡೆಯಾಗಿರುವ ಹಣವೆಷ್ಟು ?

ಇ) ಪ್ರತಿಯೊಂದು ರಸ್ತೆಗೆ ಖರ್ಚು ಮಾಡಿದ ಹಣವೆಷ್ಟು ? ಈಗ ರಸ್ತೆಗಳು ಸಂಪೂರ್ಣ ಕೆಟ್ಟಿದ್ದು, ಅವುಗಳನ್ನು ಸರಿಪಡಿಸಲು ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಜೆ. ಪುಟ್ಟಸ್ವಾಮಿ ಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಭರಮಸಾಗರ ವೀಸಲು ಕ್ಷೇತ್ರದ ವ್ಯಾಪ್ತಿಯಲ್ಲಿ ೮ ರಸ್ತೆಗಳು ಲೋಕೋಪಯೋಗಿ ಇಲಾಖೆಯ ಉಸ್ತುವಾರಿಗೆ ಬರುತ್ತವೆ. ಅವುಗಳ ವಿವರಗಳನ್ನು ಅನುಬಂಧ-೧ರಲ್ಲಿ ಕೊಡಲಾಗಿದೆ.

ಆ) ಈ ರಸ್ತೆಗಳಿಗೆ ೮೭-೮೮, ೮೮-೮೯ ಹಾಗೂ ೮೯-೯೦ನೇ ಆಯವ್ಯಯಗಳಲ್ಲಿ ಒದಗಿಸಿದ ಅನುದಾನ ಹಾಗೂ ಬಿಡುಗಡೆಯಾದ ಅನುದಾನದ ವಿವರಗಳನ್ನು ಅನುಬಂಧ-೨ರಲ್ಲಿ ಕೊಡಲಾಗಿದೆ.

ಇ) ಪ್ರತಿಯೊಂದು ರಸ್ತೆಗೆ ಖರ್ಚು ಮಾಡಿದ ಹಣದ ವಿವರಗಳನ್ನು ಅನುಬಂಧ-೧ರಲ್ಲಿ ಕೊಡ ಲಾಗಿದೆ. ರಸ್ತೆಗಳು ಸಂಪೂರ್ಣವಾಗಿ ಕೆಟ್ಟಿರುವುದಿಲ್ಲ. ವಾರ್ಷಿಕ ನಿರ್ವಹಣೆಯಲ್ಲಿ ವಾಹನ ಸಂಚಾರ ದಿಂದ ಕೆಟ್ಟು ಹೋದ ಭಾಗಗಳನ್ನು ಹಣಕಾಸಿನ ಲಭ್ಯತೆಗನುಸಾರವಾಗಿ ದುರಸ್ತಿಪಡಿಸಿ ವಾಹನ ಸಂಚಾರಕ್ಕೆ ಅನುಕೂಲವಾಗುವಂತೆ ಇಡಲಾಗುತ್ತಿದೆ.